ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:524/2020

ಚಾಸಾ:3 ಪ್ರಾಸಾ:2

ದಿನಾಂಕ: 05.04.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ರಾಜೇಶ್ ಖಾರ್ವಿ |
| ತಂದೆಯ ಹೆಸರು | : | ರುಕ್ಮ ಖಾರ್ವಿ |
| ವಯಸ್ಸು | : | 48 ವರ್ಷ |
| ಉದ್ಯೋಗ | : | ಚಿಪ್ಪಿ ಕೆಲಸ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿತರ ಪರಿಚಯವಿಲ್ಲ. ಸಾಕ್ಷಿಗೆ ನಿಪಿ-2ರ ಮಹಜರನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. 5 ವರ್ಷಗಳ ಹಿಂದೆ ಸದ್ರಿ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ. ಸಾಕ್ಷಿಗೆ 2 ಪೋಟೋಗಳನ್ನು ತೋರಿಸಲಾಗಿದ್ದು ಅದನ್ನು ನೋಡಿ ಗುರುತಿಸಿರುವುದಿಲ್ಲ.

ದಿ: 19-07-2019ರ ಸ್ಥಳ ಪಂಚನಾಮೆ ತೋರಿಸಿದ್ದು ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ದಾಖಲೆಯನ್ನು ನಿಪಿ-3 ಎಂದು, ಸಾಕ್ಷಿ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ</u>**

ದಿಃ18-07-2019ರ ರಾತ್ರಿ 00-15 ರಿಂದ 1-15ರವರೆಗೂ ಪಂಚನಾಮೆಯಲ್ಲಿ ಸಹಕರಿಸಲು ಪೊಲೀಸರು ನನ್ನನ್ನು ಕರೆದಿದ್ದರು ಎಂದರೆ ಸರಿ. ನಾನು ಆಗ ಅಲ್ಲಿ ಹಾಜರು ಇದ್ದೆ ಎಂದರೆ ಸರಿ. 1ನೇ ಆರೋಪಿಯು ಜಾಗವನ್ನು ತೋರಿಸಿದ್ದು, ಮರಳು ತುಂಬಿದ್ದ ಕೆಎ-20-ಸಿ-9308 ಟಾಟಾ ಎ ಎಸ್ ವಾಹನವನ್ನು 2ನೇ ಆರೋಪಿಯೊಂದಿಗೆ ಸೇರಿ 40 ಸಿಮೆಂಟ್ ಚೀಲಗಳಲ್ಲಿ ಮರಳನ್ನು ತುಂಬಿಸಿ ಅದನ್ನು ರವಾನೆ ಮಾಡುತ್ತಿರುವುದಾಗಿ ಮಾಹಿತಿ ನೀಡಿ ಸದ್ರಿ ಸ್ಥಳದಲ್ಲಿ ಪಂಚನಾಮೆ ಜರುಗಿಸಿ ಫೋಟೋ ತೆಗೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಆರೋಪಿತರು ತೋರಿಸಿದ ಸ್ಥಳದಲ್ಲಿ ದಿಃ 19-07-2019 ರಂದು ಬೆಳಗ್ಗೆ 9 ರಿಂದ 9-45ರವರೆಗೂ ಪಂಚನಾಮೆಯನ್ನು ಜರುಗಿಸಿ ನಿಪಿ-3ಕ್ಕೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿತರು ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಎಂ ಡಿ ಎಸ್ ರವರಿಂದಃ</u>**

ನಿಪಿ-2 ಮತ್ತು 3 ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಠಾಣೆಯಲ್ಲಿ ಫೋಟೋಗಳನ್ನು ಯಾವ ಉದ್ದೇಶಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ತಿಳಿದಿಲ್ಲ. ಆರೋಪಿತರನ್ನು ನಾನು ಆ ಸಮಯದಲ್ಲಿ ನೋಡಿಲ್ಲ.

**<u>ಮರು ವಿಚಾರಣೆಃ</u>** <u>ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**